All India Radio: Bangalore
National Bulletin In Kannada
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
24.03.2025 19.35 P.M.

***************

ಮುಖ್ಯಾಂಶಗಳು

- ಸಂವಿಧಾನ ತಿದ್ದುಪಡಿ ಕುರಿತ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹೇಳಿಕೆ; ಸಂಸತ್ತಿನ ಉಭಯ ಸದನಗಳಲ್ಲಿ ಗದ್ದಲ
- ದೆಹಲಿ ಹೈಕೋರ್ಟ್ ನ್ಯಾಯಮೂರ್ತಿ ನಿವಾಸದಲ್ಲಿ ನಗದು ಪತ್ತೆ ಪ್ರಕರಣ; ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್ ನೇತೃತ್ವದಲ್ಲಿ ಸಭೆ
- ಕೇಂದ್ರ ಸರ್ಕಾರದಿಂದ ಸಂಸತ್ ಸದಸ್ಯರು, ಮಾಜಿ ಸದಸ್ಯರ ವೇತನ ಹೆಚ್ಚಳ
- ಈರುಳ್ಳಿ ಮೇಲಿನ ಶೇಕಡ ೨೦ ರಷ್ಟು ರಫ್ತು ಸುಂಕವನ್ನು ರದ್ದುಗೊಳಿಸಿದ ಕೇಂದ್ರ ಸರ್ಕಾರ
- ಐಪಿಎಲ್ ಟಿ-೨೦ ಕ್ರಿಕೆಟ್; ಇಂದು ಡೆಲ್ಲಿ ಕ್ಯಾಪಿಟಲ್ಸ್-ಲಕ್ನೋ ಸೂಪರ್ ಜೇಂಟ್ಸ್ ಮುಖಾಮುಖಿ

****************

ರಾಷ್ಟ್ರೀಯ ವಾರ್ತೆಗಳು ೨೪.೦೩.೨೦೨೫ ೧೯೩೫ ಸಂಸತ್ ಕಲಾಪ-೧

ಮುಸ್ಲಿಮರಿಗೆ ಮೀಸಲಾತಿ ನೀಡಲು ಸಂವಿಧಾನಕ್ಕೆ ತಿದ್ದುಪಡಿ ತರುವ ಬಗ್ಗೆ ಕರ್ನಾಟಕ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ನೀಡಿದ ಹೇಳಿಕೆ ಇಂದು ಸಂಸತ್ತಿನ ಉಭಯ ಸದನಗಳಲ್ಲಿ ಗದ್ದಲಕ್ಕೆ ಕಾರಣವಾಯಿತು. ಸದನವನ್ನು ದಿನದ ಮಟ್ಟಿಗೆ ಮುಂದೂಡಲಾಯಿತು.

ರಾಜ್ಯಸಭೆಯಲ್ಲಿ ಎರಡನೇ ಬಾರಿ ಮುಂದೂಡಿಕೆಯ ನಂತರ ಮಧ್ಯಾಹ್ನ ೨.೧೫ಕ್ಕೆ ಸದನ ಸೇರಿದಾಗ ಗದ್ದಲದ ನಡುವೆ ತೈಲಕ್ಷೇತ್ರಗಳ ನಿಯಂತ್ರಣ ಹಾಗೂ ಅಭಿವೃದ್ಧಿ ತಿದ್ದುಪಡಿ ವಿಧೇಯಕ, ೨೦೨೪ರಲ್ಲಿ ಲೋಕಸಭೆ ಮಾಡಿದ ಕೆಲವು ತಿದ್ದುಪಡಿಗಳನ್ನು ಸದನ ಅಂಗೀಕರಿಸಿತು. ವಿದೇಯಕವನ್ನು ಈಗಾಗಲೇ ರಾಜ್ಯಸಭೆ ಅಂಗೀಕರಿಸಿದೆ.

ಇದಕ್ಕೂ ಮುನ್ನ ಸದನದಲ್ಲಿ ವಿರೋಧ ಪಕ್ಷದ ನಾಯಕ ಮಲ್ಲಿಕಾರ್ಜುನ ಖರ್ಗೆ ಮಾತನಾಡಿ, ಸಂವಿಧಾನ ಬದಲಾಯಿಸುವ ಬಗ್ಗೆ ಡಿ.ಕೆ.ಶಿವಕುಮಾರ್ ಏನು ಹೇಳಿಲ್ಲ. ಕಾಂಗ್ರೆಸ್ ಇರುವುದು ಸಂವಿಧಾನವನ್ನು ರಕ್ಷಿಸಲು ಎಂದು ಹೇಳಿದರು.

ಇದಕ್ಕೆ ಸದನದ ನಾಯಕ ಜೆ.ಪಿ.ನಡ್ಡಾ ಪ್ರತಿಕ್ರಿಯಿಸಿ, ಸದನದಲ್ಲಿ ಕಾಂಗ್ರೆಸ್ ಸತ್ಯ ಮಾತನಾಡುತ್ತಿಲ್ಲ. ಈಗಾಗಲೇ ಕರ್ನಾಟಕದ ಕಾಂಗ್ರೆಸ್ ಸರ್ಕಾರ, ಸರ್ಕಾರಿ ಗುತ್ತಿಗೆಗಳಲ್ಲಿ ಧರ್ಮದ ಆಧಾರದಲ್ಲಿ ಮುಸ್ಲಿಂಮರಿಗೆ ಶೇಕಡ ೪ ರಷ್ಟು ಮೀಸಲಾತಿ ನೀಡಿದೆ ಎಂದು ಹೇಳಿದರು.

ಇದೇ ವೇಳೆ ತೆಲಂಗಾಣದ ಕಾಂಗ್ರೆಸ್ ಸರ್ಕಾರ, ನಿರ್ದಿಷ್ಟ ಅಲ್ಪಸಂಖ್ಯಾತ ಸಮುದಾಯಕ್ಕೆ ಮೀಸಲಾತಿ ನೀಡುವ ಮೂಲಕ ಎಸ್‌ಸಿ, ಎಸ್‌ಟಿ ಮತ್ತು ಒಬಿಸಿ ಮೀಸಲಾತಿಯ ಹಿತಾಸಕ್ತಿಗಳಿಗೆ ವಿರುದ್ಧವಾಗಿ ಕೆಲಸ ಮಾಡಿದೆ ಎಂದು ಅವರು ಆಕ್ಷೇಪಿಸಿದರು.

ಲೋಕಸಭೆಯಲ್ಲಿ ಮೊದಲ ಮುಂದೂಡಿಕೆಯ ನಂತರ ೧೨ ಗಂಟೆಗೆ ಸದನ ಮತ್ತೆ ಸೇರಿದಾಗ ಕೇಂದ್ರ ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು ಮಾತನಾಡಿ, ಧರ್ಮದ ಆಧಾರದ ಮೇಲೆ ಮೀಸಲಾತಿ ವಿಷಯವು ೧೯೪೭ರಲ್ಲಿ ಪರಿಗಣನೆಗೆ ಬಂದಿತ್ತು. ಆದರೆ, ಅಂದಿನ ಪ್ರಮುಖ ನಾಯಕರು ಅದನ್ನು ತಿರಸ್ಕರಿಸಿದ್ದರು ಎಂದು ಹೇಳಿದರು.

ಈ ಹೇಳಿಕೆಗಾಗಿ ಸಾಂವಿಧಾನಿಕ ಹುದ್ದೆಯಿಂದ ಡಿ.ಕೆ.ಶಿವಕುಮಾರ್ ಅವರನ್ನು ಕಾಂಗ್ರೆಸ್ ತೆಗೆದು ಹಾಕಬೇಕು ಎಂದು ಅವರು ಆಗ್ರಹಿಸಿದರು. ಗದ್ದಲದ ನಡುವೆ ಸಭಾಧ್ಯಕ್ಷರು ಪ್ರತಿಭಟನೆ ಕೈಬಿಡುವಂತೆ ಪ್ರತಿಭಟನಾನಿರತ ಸದಸ್ಯರಿಗೆ ಮನವಿ ಮಾಡಿದರು. ಆದರೆ, ಪ್ರತಿಭಟನೆ ಮುಂದುವರೆದಾಗ ಸದನವನ್ನು ಮುಂದೂಡಿದರು.

****************

ಮುಸ್ಲಿಮರಿಗೆ ಮೀಸಲಾತಿ ನೀಡುವ ನಿಟ್ಟಿನಲ್ಲಿ ಕರ್ನಾಟಕ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ನೀಡಿರುವ ಸಂವಿಧಾನ ಬದಲಾವಣೆ ಹೇಳಿಕೆಗೆ ಸಂಬಂಧಿಸಿದಂತೆ ಕಾಂಗ್ರೆಸ್ ವಿರುದ್ಧ ಬಿಜೆಪಿ ತೀವ್ರ ವಾಗ್ದಾಳಿ ನಡೆಸಿದೆ.

ಈ ಕುರಿತು ನವೆದಹಲಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಬಿಜೆಪಿ ಸಂಸದ ಸಂಬಿತ್ ಪಾತ್ರ, ಈ ಹೇಳಿಕೆ ಕೇವಲ ಡಿ.ಕೆ.ಶಿವಕುಮಾರ್ ಅವರ ಸ್ವಂತ ಹೇಳಿಕೆಯಲ್ಲ. ಬದಲಾಗಿ ಕಾಂಗ್ರೆಸ್ ಪಕ್ಷ ಮತ್ತು ಸೋನಿಯಾ ಗಾಂಧಿ ಕುಟುಂಬದ ಅಭಿಪ್ರಾಯಗಳನ್ನು ಪ್ರತಿಬಿಂಬಿಸುತ್ತದೆ ಎಂದು ಹೇಳಿದರು.

ನವದೆಹಲಿಯ ಬಿಜೆಪಿ ಪ್ರಧಾನ ಕಚೇರಿಯಲ್ಲಿ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಹಿರಿಯ ಬಿಜೆಪಿ ನಾಯಕ ರವಿಶಂಕರ್ ಪ್ರಸಾದ್, ಧರ್ಮ ಆಧಾರಿತ ಮೀಸಲಾತಿ ಕುರಿತು ಕಾಂಗ್ರೆಸ್ ಅನ್ನು ಪ್ರಶ್ನಿಸಿದರು. ಅಂತಹ ಮೀಸಲಾತಿಯನ್ನು ಸಂವಿಧಾನ ಅನುಮತಿಸುವುದಿಲ್ಲ ಮತ್ತು ಕರ್ನಾಟಕ ಸರ್ಕಾರವು ಇದನ್ನು ಉಲ್ಲಂಘಿಸುತ್ತಿದೆ ಎಂದು ಅವರು ಆರೋಪಿಸಿದರು.

****************

ಲೋಕಸಭೆಯಲ್ಲಿ ಇಂದು ಹಣಕಾಸು ವಿಧೇಯಕ ೨೦೨೫ ಅನ್ನು ಚರ್ಚೆಗೆ ಕೈಗೆತ್ತಿಕೊಳ್ಳಲಾಯಿತು. ಚರ್ಚೆ ಆರಂಭಿಸಿದ ಕಾಂಗ್ರೆಸ್‌ನ ಶಶಿ ತರೂರ್ ಮಾತನಾಡಿ, ದೇಶದಲ್ಲಿ ಜಿಎಸ್‌ಟಿ ಮಾದರಿ ಬಹಳ ಸಂಕೀರ್ಣವಾಗಿದೆ ಎಂದು ಹೇಳಿದರು.

ಸಣ್ಣ ಸಿಹಿ ತಿಂಡಿ ಅಂಗಡಿಗಳು ಶೇಕಡ ೧೮ ರಷ್ಟು ಜಿಎಸ್‌ಟಿ ಪಾವತಿಸುತ್ತಿದೆ. ಅವರಿಗೆ ಸಾಕಷ್ಟು ಲಾಭ ದೊರೆಯುತ್ತಿಲ್ಲ. ಸರ್ಕಾರಕ್ಕೆ ತೆರಿಗೆ ಪಾವತಿಸುತ್ತಿರುವ ಸಾಮಾನ್ಯ ಜನತೆಗೆ ಉಪಶಮನ ಬೇಕಾಗಿದೆ ಎಂದು ಶಶಿ ತರೂರ್ ಒತ್ತಾಯಿಸಿದರು.

ಇಡೀ ವಿಶ್ವವೇ ಆರ್ಥಿಕ ಬಿಕ್ಕಟ್ಟು ಎದುರಿಸುತ್ತಿದ್ದರೆ, ಭಾರತ ಕಳೆದ ೧೦ ವರ್ಷಗಳಲ್ಲಿ ಆರ್ಥಿಕತೆಯಲ್ಲಿ ಉತ್ತಮವಾಗಿ ಹೊರಹೊಮ್ಮಿದೆ ಎಂದು ಬಿಜೆಪಿಯ ನಿಶಿಕಾಂತ್ ದುಬೆ ಹೇಳಿದರು.

ಆನ್‌ಲೈನ್ ಗೇಮಿಂಗ್‌ನ ಅನಿಯಂತ್ರಿತ ಬೆಳವಣಿಗೆಯನ್ನು ನಿಯಂತ್ರಿಸಲು, ಅದರ ಮೇಲೆ ಶೇಕಡ ೨೮ ರಷ್ಟು ಜಿಎಸ್‌ಟಿ ವಿಧಿಸಲಾಗಿದೆ. ಆನ್‌ಲೈನ್ ಗೇಮಿಂಗ್ ಯುವಜನತೆಗೆ ಹಾನಿಕಾರಕ ಪರಿಣಾಮ ಉಂಟು ಮಾಡುತ್ತಿದ್ದು, ಅವರು ತಮ್ಮ ಪೋಷಕರ ಶ್ರಮದ ದುಡಿಮೆಯನ್ನು ಬೆಟ್ಟಿಂಗ್ ಮೇಲೆ ಖರ್ಚು ಮಾಡುತ್ತಿದ್ದಾರೆ ಎಂದರು.

****************

ಎಡಪಂಥೀಯ ಉಗ್ರವಾದದಿಂದ ಬಳಲುತ್ತಿರುವ ಜನರನ್ನು ಸಮಾಜದ ಮುಖ್ಯವಾಹಿನಿಗೆ ತರುವ ಕಾರ್ಯವು ಅಂತಿಮ ಮತ್ತು ನಿರ್ಣಾಯಕ ಹಂತವನ್ನು ತಲುಪಿದೆ ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಹೇಳಿದ್ದಾರೆ.

ರಾಯ್‌ಪುರದಲ್ಲಿ ಇಂದು ನಡೆದ ಛತ್ತೀಸ್‌ಗಢ ವಿಧಾನಸಭೆಯ ಬೆಳ್ಳಿ ಮಹೋತ್ಸವ ಉದ್ದೇಶಿಸಿ ಮಾತನಾಡಿದ ಅವರು, ಛತ್ತೀಸ್‌ಗಢದ ನಕ್ಸಲ್ ಪೀಡಿತ ಪ್ರದೇಶಗಳ ಜನರು ಅಭಿವೃದ್ಧಿಯ ಹಾದಿಯಲ್ಲಿ ಮುಂದುವರಿಯಲು ಬಯಸುತ್ತಾರೆ ಎಂದರು.

ಛತ್ತೀಸ್‌ಗಢವನ್ನು ಉಗ್ರವಾದದಿಂದ ಸಂಪೂರ್ಣವಾಗಿ ಮುಕ್ತಗೊಳಿಸುವ ಪ್ರಯತ್ನಗಳಲ್ಲಿ ರಾಜ್ಯದ ಜನರು ಶೀಘ್ರದಲ್ಲೇ ಯಶಸ್ಸನ್ನು ಸಾಧಿಸುತ್ತಾರೆ ಎಂದು ಅವರು ವಿಶ್ವಾಸ ವ್ಯಕ್ತಪಡಿಸಿದರು.

ವಿವಿಧ ಕ್ಷೇತ್ರಗಳಲ್ಲಿ ಕೆಲಸ ಮಾಡುವ ಮಹಿಳೆಯರನ್ನು ಉತ್ತೇಜಿಸಲು ಯಾವಾಗಲೂ ಸಿದ್ಧರಾಗಿರಬೇಕು ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಹೇಳಿದರು.

****************

ದೆಹಲಿ ಹೈಕೋರ್ಟ್ ನ್ಯಾಯಮೂರ್ತಿ ನಿವಾಸದಲ್ಲಿ ನಗದು ಪತ್ತೆ ಪ್ರಕರಣದ ಬಗ್ಗೆ ರಾಜ್ಯಸಭಾ ಸಭಾಪತಿ ಕೂಡ ಆಗಿರುವ ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್ ಕಳವಳ ವ್ಯಕ್ತಪಡಿಸಿದ್ದು, ಇಂತಹ ಪ್ರಕರಣ ಮರುಕಳಿಸದಂತೆ ತಡೆಯಲು ಕ್ರಮ ಕೈಗೊಳ್ಳಬೇಕೆಂದು ಕರೆ ನೀಡಿದ್ದಾರೆ.

ಈ ವಿಷಯದ ಕುರಿತು ಅವರು ಸಂಸತ್ ಭವನದಲ್ಲಿಂದು ಸದನದ ನಾಯಕ ಜೆ.ಪಿ.ನಡ್ಡಾ ಮತ್ತು ವಿರೋಧ ಪಕ್ಷದ ನಾಯಕ ಮಲ್ಲಿಕಾರ್ಜುನ ಖರ್ಗೆ ಅವರೊಂದಿಗೆ ಸಭೆ ನಡೆಸಿದರು.

ಈ ವಿಷಯದಲ್ಲಿ ತ್ವರಿತ ಕ್ರಮ ಕೈಗೊಂಡಿದ್ದಕ್ಕಾಗಿ ಸುಪ್ರೀಂಕೋರ್ಟ್ ಮುಖ್ಯ ನ್ಯಾಯಮೂರ್ತಿ ಸಂಜೀವ್ ಖನ್ನಾ ಅವರನ್ನು ಉಪರಾಷ್ಟ್ರಪತಿಗಳು ಶ್ಲಾಘಿಸಿದರು. ಮುಖ್ಯ ನ್ಯಾಯಮೂರ್ತಿಗಳಿಂದ ಸಮಿತಿ ರಚನೆಯು ಸಹ ಪರಿಗಣನೆಗೆ ಅಗತ್ಯವಿರುವ ಅಂಶವಾಗಿದೆ. ಸಮಿತಿಯ ವರದಿಗಾಗಿ ಕಾಯುವುದು ಯೋಗ್ಯವಾಗಿದೆ ಎಂದು ಅವರು ಅಭಿಪ್ರಾಯಪಟ್ಟರು.

ಈ ಕುರಿತು ಮಲ್ಲಿಕಾರ್ಜುನ ಖರ್ಗೆ ಮತ್ತು ಜೆ.ಪಿ.ನಡ್ಡಾ ಸೂಚಿಸಿದಂತೆ ಸಭೆಯನ್ನು ಕರೆಯಲಾಗುವುದು. ಈ ಕುರಿತು ನಿರ್ಧಾರ ತೆಗೆದುಕೊಳ್ಳಲು ರಾಜ್ಯಗಳ ಪರಿಷತ್ತುಗಳ ಸದನ ನಾಯಕರಿಗೆ ಆಹ್ವಾನ ನೀಡಲಾಗುವುದು ಎಂದು ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್ ತಿಳಿಸಿದರು.

****************

ಸಂಸತ್ ಸದಸ್ಯರು ಮತ್ತು ಸಂಸತ್‌ನ ಮಾಜಿ ಸದಸ್ಯರ ವೇತನ, ದಿನ ಭತ್ಯೆ ಮತ್ತು ಪಿಂಚಣಿಯನ್ನು ಕೇಂದ್ರ ಸರ್ಕಾರ ಹೆಚ್ಚಳ ಮಾಡಿದೆ.

ಸಂಸತ್ ಸದಸ್ಯರ ಮಾಸಿಕ ವೇತನವು ಒಂದು ಲಕ್ಷ ರೂಪಾಯಿಗಳಿಂದ ಒಂದು ಲಕ್ಷ ೨೪ ಸಾವಿರ ರೂಪಾಯಿಗಳಿಗೆ ಹೆಚ್ಚಿಸಲಾಗಿದೆ. ದಿನ ಭತ್ಯೆಯು ೨ ಸಾವಿರ ರೂಪಾಯಿಗಳಿಂದ ೨ ಸಾವಿರದ ೫೦೦ ರೂಪಾಯಿಗಳಿಗೆ ಹೆಚ್ಚಿಸಲಾಗಿದೆ.

ಸಂಸತ್ ಸದಸ್ಯರು ಮತ್ತು ಮಾಜಿ ಸದಸ್ಯರ ಮಾಸಿಕ ಪಿಂಚಣಿಯನ್ನು ೨೫ ಸಾವಿರ ರೂಪಾಯಿಗಳಿಂದ ೩೧ ಸಾವಿರ ರೂಪಾಯಿಗಳಿಗೆ ಪರಿಷ್ಕರಿಸಲಾಗಿದೆ. ಇದು ೨೦೨೩ರ ಏಪ್ರಿಲ್ ೧ ರಿಂದ ಪೂರ್ವಾನ್ವಯವಾಗಲಿದೆ.

***************

ಈರುಳ್ಳಿ ಮೇಲಿನ ಶೇಕಡ ೨೦ ರಷ್ಟು ರಫ್ತು ಸುಂಕವನ್ನು ಕೇಂದ್ರ ಸರ್ಕಾರ ಸಂಪೂರ್ಣವಾಗಿ ರದ್ದುಗೊಳಿಸಿದೆ ಎಂದು ಕೇಂದ್ರ ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ತಿಳಿಸಿದ್ದಾರೆ.

ನವದೆಹಲಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈರುಳ್ಳಿ ಮೇಲಿನ ರಫ್ತು ಸುಂಕವನ್ನು ತೆಗೆದು ಹಾಕುವುದರಿಂದ ರೈತರು ಕಷ್ಟಪಟ್ಟು ಬೆಳೆಸಿದ ಉತ್ಪನ್ನಗಳು, ಸುಂಕರಹಿತವಾಗಿ ಜಾಗತಿಕ ಮಾರುಕಟ್ಟೆಗಳನ್ನು ತಲುಪಲು ಸಾಧ್ಯವಾಗಲಿದೆ. ಅಲ್ಲದೇ, ಉತ್ತಮ ಮತ್ತು ಹೆಚ್ಚು ಲಾಭದಾಯಕ ಬೆಲೆಗಳನ್ನು ಪಡೆಯುತ್ತವೆ ಎಂದು ಹೇಳಿದರು.

ಧ್ವನಿ: ಶಿವರಾಜ್ ಸಿಂಗ್ ಚೌಹಾಣ್ ೨೦ ಸೆಕೆಂಡ್‌ಗಳು

ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಸರ್ಕಾರ ರೈತಸ್ನೇಹಿಯಾಗಿದ್ದು, ರೈತರಿಗೆ ಲಾಭದಾಯಕ ಬೆಲೆಗಳನ್ನು ನೀಡುವುದು ಮತ್ತು ನ್ಯಾಯಯುತ ಬೆಲೆಗಳನ್ನು ಖಚಿತಪಡಿಸಿಕೊಳ್ಳುವುದು ಸರ್ಕಾರದ ಆದ್ಯತೆಯಾಗಿದೆ ಎಂದು ಸಚಿವ ಶಿವರಾಜ್ ಸಿಂಗ್ ಚೌಹಾಣ್ ಹೇಳಿದರು.

ದೇಶೀಯ ಲಭ್ಯತೆಯನ್ನು ಖಚಿತಪಡಿಸಿಕೊಳ್ಳಲು ಕಳೆದ ವರ್ಷ ಸೆಪ್ಟೆಂಬರ್ ೧೩ ರಿಂದ ಈರುಳ್ಳಿ ಮೇಲೆ ಶೇಕಡ ೨೦ರಷ್ಟು ರಫ್ತು ಸುಂಕ ಜಾರಿಯಲ್ಲಿತ್ತು. ಕೃಷಿ ಮತ್ತು ರೈತ ಕಲ್ಯಾಣ ಇಲಾಖೆಯ ಅಂದಾಜಿನ ಪ್ರಕಾರ, ಈ ವರ್ಷದ ಹಿಂಗಾರು ಈರುಳ್ಳಿ ಉತ್ಪಾದನೆಯು ೨೨೭ ಲಕ್ಷ ಮೆಟ್ರಿಕ್ ಟನ್‌ಗಳಾಗಿದ್ದು, ಕಳೆದ ವರ್ಷಕ್ಕಿಂತ ಶೇಕಡ ೧೮ ರಷ್ಟು ಹೆಚ್ಚಾಗಿದೆ.

***************

ನಕಲಿ ಪಡಿತರ ಚೀಟಿಗಳನ್ನು ನಿವಾರಿಸಲು ಸರ್ಕಾರ ಎಲ್ಲ ಪ್ರಯತ್ನ ಕೈಗೊಳ್ಳಲಿದೆ ಎಂದು ಜಮ್ಮು ಮತ್ತು ಕಾಶ್ಮೀರದ ಆಹಾರ, ನಾಗರಿಕ ಪೂರೈಕೆ ಮತ್ತು ಗ್ರಾಹಕ ವ್ಯವಹಾರಗಳ ಖಾತೆ ಸಚಿವ ಸತೀಶ್ ಶರ್ಮಾ ಹೇಳಿದ್ದಾರೆ.

ವಿಧಾನಸಭೆಯಲ್ಲಿಂದು ಪ್ರಶ್ನೊಂದಕ್ಕೆ ಉತ್ತರಿಸಿದ ಸಚಿವರು, ಪಿಡಿಎಸ್ ದತ್ತಾಂಶವನ್ನು ಸ್ಪಷ್ಟ ಮತ್ತು ವಿಶ್ವಾಸಾರ್ಹವನ್ನಾಗಿ ಮಾಡಲು ಫಲಾನುಭವಿಗಳ ಪರಿಶೀಲನೆ ಕೈಗೊಳ್ಳಬೇಕೆಂದು, ಆಡಳಿತ ವಿಭಾಗಕ್ಕೆ ಆದೇಶಿಸಲಾಗಿದೆ ಎಂದು ತಿಳಿಸಿದರು.

ಸಾರ್ವಜನಿಕ ವಿತರಣಾ ವ್ಯವಸ್ಥೆಯ ಅಡಿಯಲ್ಲಿ ಹೊಸದಾಗಿ ಒಂದು ಸಾವಿರದ ೬೦೦ ನ್ಯಾಯ ಬೆಲೆ ಅಂಗಡಿಗಳನ್ನು ತೆರೆಯುವ ಸಂಬಂಧ ಚಿಂತನೆ ನಡೆಸಲಾಗಿದೆ ಎಂದು ಸಚಿವ ಸತೀಶ್ ಶರ್ಮಾ ಹೇಳಿದರು.

***************

ಆಂಧ್ರಪ್ರದೇಶದ ವಿಶಾಖಪಟ್ಟಣಂನಲ್ಲಿ ಇಂದು ನಡೆಯುತ್ತಿರುವ ಇಂಡಿಯನ್ ಪ್ರಿಮಿಯರ್ ಲೀಗ್-ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯಾವಳಿಯಲ್ಲಿ ಡೆಲ್ಲಿ ಕ್ಯಾಪಿಟಲ್ಸ್ ಹಾಗೂ ಲಖನೌ ಸೂಪರ್ ಜೈಂಟ್ಸ್ ತಂಡಗಳು ಮುಖಾಮುಖಿಯಾಗಿವೆ.

ಟಾಸ್ ಗೆದ್ದ ಡೆಲ್ಲಿ ಕ್ಯಾಪಿಟಲ್ಸ್ ತಂಡ, ಫೀಲ್ಡಿಂಗ್ ಆಯ್ಕೆ ಮಾಡಿಕೊಂಡಿದೆ.

********ಮುಕ್ತಾಯ********